ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/06/ಇಸಿಎಸ್(1)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:27-11-2017

## ಸುತ್ತೋಲೆ

ವಿಷಯ: ದಿನಾಂಕ:02/12/2017 ರ ಥಿಯರಿ ವಿಷಯದ ಪರೀಕ್ಷೆಗಳನ್ನು ಮುಂದೂಡಿರುವ ಕುರಿತು.

ಉಲ್ಲೇಖ:ಸರ್ಕಾರದ ಅಧಿಸೂಚನೆ-I ಸಂಖ್ಯೆ: ಸಿಆಸುಇ 58 ಹೆಚ್‌ಹೆಚ್‌ಎಲ್ 2017 ದಿ:27/11/2017

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರಿ ಅಧಿಸೂಚನೆಯನ್ವಯ 2017ನೇ ಸಾಲಿನ ಈದ್ ಮಿಲಾದ್ ಹಬ್ಬದ ಆಚರಣೆಗಾಗಿ ದಿನಾಂಕ:02/12/2017ರಂದು ಸರ್ಕಾರಿ ರಜೆ ಘೋಷಣೆಯಾಗಿರುವ ಕಾರಣ 2017 ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ದಿನಾಂಕ: 02/12/2017 ಶನಿವಾರದಂದು ನಿಗದಿಯಾಗಿದ್ದ ಪರೀಕ್ಷೆಗಳನ್ನು **ದಿನಾಂಕ:21-12-2017ಕ್ಕೆ** ಮುಂದೂಡಲಾಗಿದೆ. ಪರೀಕ್ಷಾ ಸಮಯಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ ಎಂದು ತಿಳಿಸಲಾಗಿದೆ. ಪ್ರಯುಕ್ತ ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿ/ಪೋಷಕರು/ ಉಪನ್ಯಾಸಕರುಗಳ ಗಮನಕ್ಕೆ ತಪ್ಪದೇ ತರುವಂತೆ ಸಂಬಂಧಿಸಿದ ಎಲ್ಲಾ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

1. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಸೂಚನಾ ಫಲಕಗಳಲ್ಲಿ ಪ್ರಕಟಿಸಲು
2. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ ಉಪಮುಖ್ಯಅಧೀಕ್ಷಕರು / ಮುಖ್ಯ ವೀಕ್ಷಕರುಗಳಿಗೆ – ಪರೀಕ್ಷಾ ಕೊಠಡಿಗಳಲ್ಲಿ ಸುತ್ತೋಲಿಸಲು
3. ತನಿಖಾದಳಗಳ ಮುಖಂಡರುಗಳಿಗೆ – ಮಾಹಿತಿಗಾಗಿ

ಪ್ರತಿ:

1. ಇ ಗವರ್ನೆನ್ಸ್ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
2. ಗಣಕ ಕೇಂದ್ರ- ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು.